**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮುನಿರಾಜು ಗೌಡ ಪಿ.ಎಂ. (ತುಳಸಿ) ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರಿಸುವ ಬಗ್ಗೆ.**

**:: ಪ್ರಶ್ನೆ ::**

ನಮ್ಮ ಸಂವಿಧಾನದ 21 A ಕಾಲಂನಲ್ಲಿ 6 ವರ್ಷದಿಂದ 14 ವರ್ಷದವರೆಗಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕನ್ನು ನೀಡಲಾಗಿದೆ. ಆದರೆ ಬಡತನ, ತಂದೆ-ತಾಯಿಗಳ ನಿರುದ್ಯೋಗ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುತ್ತಿದೆ. ನಲಿಯುತ್ತಾ ಕಲಿಯಬೇಕಾದ ಮಕ್ಕಳು ಇಂದು ಬಡತನದ ಬೇಗೆಗೆ ಸಿಲುಕಿ ಕೂಲಿ ಕಾರ್ಮಿಕರಾಗುತ್ತಿದ್ದಾರೆ.

ವಿಜಯಪುರ ಜಿಲ್ಲೆ, ತಾಳಿಕೋಟೆಯಲ್ಲಿ ಶಾಲೆಗೆ ತೆರಳಬೇಕಾದ ವಿದ್ಯಾರ್ಥಿಗಳು ಪಾಲಕರ ಜೊತೆಯಲ್ಲಿ ಕೂಲಿಗಾಗಿ ತೆರಳುತ್ತಿದ್ದ ಸಂದರ್ಭದಲ್ಲಿ ವಾಹನ ಪಲ್ಟಿಯಾಗಿ ವಿದ್ಯಾರ್ಥಿನಿ ಕಲ್ಪನಾ ಭಜಂತ್ರಿ ಮೃತ ಪಟ್ಟಿರುತ್ತಾರೆ. ಸದರಿ ವಾಹನದಲ್ಲಿ 12ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದ್ದು, ಅದರಲ್ಲಿ 4 ಜನರ ಸ್ಥಿತಿ ಗಂಭೀರವಾಗಿರುವುದಾಗಿ ವರದಿಯಾಗಿರುತ್ತದೆ. ಅಪ್ರಾಪ್ತರನ್ನು ದುಡಿಮೆಗೆ ಬಳಸುವುದು ಅಪರಾಧ ಎಂದು ತಿಳಿದಿದ್ದರೂ ಸಹ ಶಾಲೆಗೆ ತೆರಳುವ ಮಕ್ಕಳನ್ನು ಕೂಲಿಗೆ ಕಳುಹಿಸಲಾಗುತ್ತಿದೆ. ಶಾಲೆಗಳಲ್ಲಿ ಇತ್ತೀಚೆಗೆ ಡ್ರಾಪೌಟ್ ಸಹ ಹೆಚ್ಚಾಗುತ್ತಿದೆ, ಆದ್ದರಿಂದ ಶಾಲಾ ಹಾಜರಾತಿ ಪರಿಶೀಲಿಸಬೇಕು. ಎಲ್ಲಾ ಶಾಲೆಗಳಲ್ಲಿ ಶೇ. 100% ಹಾಜರಾತಿ ಇರುವಂತೆ ಕ್ರಮವಹಿಸಬೇಕು. ರಾಜ್ಯದಲ್ಲಿ ಭೀಕರ ಬರಗಾಲವಿರುವ ಕಾರಣ ತಂದೆ-ತಾಯಿಗಳು ಹೊಟ್ಟೆಪಾಡಿಗಾಗಿ ಕೂಲಿಗಾಗಿ ದೂರದ ಊರುಗಳಿಗೆ ಹೋಗುವಂತಾಗಿದೆ. ಇಂತಹ ವಲಸೆ ಪದ್ಧತಿ ತೊಲಗಿಸಲು ಪೋಷಕರಿಗೆ ಸ್ಥಳೀಯವಾಗಿ ಉದ್ಯೋಗ ದೊರೆಯುವಂತೆ ಮಾಡಬೇಕು. ಬರಪರಿಹಾರ ಕಾರ್ಯಕ್ರಮಗಳನ್ನು ಗ್ರಾಮೀಣ ಮಟ್ಟದಿಂದಲೇ ಪ್ರಾರಂಭಿಸಬೇಕು. ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಎಲ್ಲಾ ಮಕ್ಕಳಿಗೆ ಉಚಿತವಾಗಿ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

**:: ಉತ್ತರ ::**

ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ 2009 ರಂತೆ ಕರ್ನಾಟಕದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012ನ್ನು ಜಾರಿಗೊಳಿಸಲಾಗಿರುತ್ತದೆ. ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009ರ ನಿಯಮ 5ರ ಅಡಿ ಒಂದೇ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣವನ್ನು 1ನೇ ತರಗತಿಯಿಂದ 8ನೇ ತರಗತಿವರೆಗೆ (6 ರಿಂದ 14 ವರ್ಷದ ಒಳಗಿನ) ಅರ್ಹ ಖಾಸಗಿ ಶಾಲೆಗಳಲ್ಲಿ ಮಕ್ಕಳಿಗೆ ಶೇ.25% ರಷ್ಟು ಉಚಿತ ಸೀಟುಗಳನ್ನು ಕಾಯ್ದಿರಿಸಿ ಅಂತಹ ಶಾಲೆಗಳಿಗೆ ನಿಗದಿಪಡಿಸಿದ ಶುಲ್ಕವನ್ನು ಮರುಭರಣ ಮಾಡುವುದರೊಂದಿಗೆ ಶಿಕ್ಷಣವನ್ನು ಪೂರ್ಣಗೊಳಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

ಸ್ಥಳೀಯ ಪೋಷಕರಿಗೆ ಸ್ವ-ಉದ್ಯೋಗ ದೊರಕಿಸುವ ಕುರಿತಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಸ್ಥಳೀಯವಾಗಿ ಉದ್ಯೋಗ ನೀಡಲಾಗುತ್ತದೆ. ವಿದ್ಯಾರ್ಥಿಗಳ ಪೋಷಕರುಗಳಿಗೆ ಪ್ರತ್ಯೇಕವಾಗಿ ಉದ್ಯೋಗ ದೊರಕಿಸುವ ಯೋಜನೆ ಶಾಲಾ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲ.

ವಿಜಯಪುರ ಜಿಲ್ಲೆ ತಾಳಿಕೋಟೆಯಲ್ಲಿ ಕೂಲಿಗೆ ವಾಹನದಲ್ಲಿ ತೆರಳುತ್ತಿದ್ದ ಪೋಷಕರೊಂದಿಗೆ ಮಕ್ಕಳು ಇದ್ದು, ವಾಹನವು ಪಲ್ಟಿಯಾಗಿ ಕಲ್ಪನಾ ಭಜಂತ್ರಿ ಎಂಬ ವಿದ್ಯಾರ್ಥಿನಿ ಮೃತಪಟ್ಟಿರುವ ಬಗ್ಗೆ ಹಾಗೂ ಕೆಲವು ವಿದ್ಯಾರ್ಥಿಗಳು ಗಾಯಗೊಂಡಿರುವ ಕುರಿತು ಈ ಸಂಜೆ ಮತ್ತು ವಿಶ್ವವಾಣಿ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ವರದಿಗೆ ಸಂಬಂಧಿಸಿದಂತೆ, ವಿಜಯಪುರ ಜಿಲ್ಲಾ ಉಪನಿರ್ದೇಶಕರಿಗೆ ತನಿಖೆ ಮಾಡಿ ಈ ಬಗ್ಗೆ ವಿವರವಾದ ವರದಿಯನ್ನು ತಕ್ಷಣ ಕ್ರಮಕ್ಕೆ ಸಲ್ಲಿಸಲು ಆಯುಕ್ತಾಲಯದಿಂದ ತಿಳಿಸಲಾಗಿದೆ. ಇದಕ್ಕೆ ಸಂಬಂಧಪಟ್ಟಂತೆ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ವಿಜಯಪುರ ಇವರು ತನಿಖೆ ಮಾಡಿ ಸಲ್ಲಿಸಿರುವ ವರದಿಯಲ್ಲಿ ವಿದ್ಯಾರ್ಥಿನಿಯು ದಿನಾಂಕ 27/11/2023ರಂದು ಸಂಬಂಧಿಕರ ಮನೆಗೆ ತೆರಳಿದ್ದು, ಅಲ್ಲಿಂದ ಹಿಂದಿರುಗುವ ಸಮಯಲದಲ್ಲಿ ಅಂದರೆ ದಿನಾಂಕ 04/12/2023ರಂದು ಬಿಳೇಬಾವಿ ಗ್ರಾಮದ ಮಾರ್ಗದ ಮಧ್ಯೆ ಆಕಸ್ಮಿಕ ರಸ್ತೆ ಅಪಘಾತದಲ್ಲಿ ಮೃತಳಾಗಿದ್ದು, ಶಾಲೆಗೆ ಹೋಗುವ ಸಂದರ್ಭದಲ್ಲಿ ಈ ಘಟನೆಯು ಸಂಭವಿಸಿರುವುದಿಲ್ಲ. ಆದಾಗ್ಯೂ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ವಿಜಯಪುರ ರವರು ವಿದ್ಯಾರ್ಥಿನಿಯ ಪೋಷಕರನ್ನು ಸಂಪರ್ಕಿಸಿ ಸರ್ಕಾರದಿಂದ ಬರುವ ಸೌಲಭ್ಯಗಳನ್ನು ನಿಯಮಾನುಸಾರ ವಿತರಿಸಲು ಕ್ರಮವಹಿಸಲಾಗುವುದೆಂದು ಸಾಂತ್ವಾನ ಹೇಳಿರುವುದಾಗಿ ವರದಿಸಿರುತ್ತಾರೆ (ಪ್ರತಿ ಲಗತ್ತಿಸಿದೆ).

ವಿವಿಧ ಕಾರಣಗಳಿಂದ ಶಾಲೆಯನ್ನು ಅರ್ಧಕ್ಕೆ ಬಿಡುವ ಮಕ್ಕಳ ಮರುದಾಖಲಾತಿಯನ್ನು ಅನುಪಾಲಿಸಲು ಶಾಲೆಗಳಲ್ಲಿ ಹಾಜರಾತಿ ಪರಿಶೀಲನೆಗೆ ಆ ವಲಯದ ಶಿಕ್ಷಣ ಸಂಯೋಜಕರನ್ನು ಹಾಜರಾತಿ ಅಧಿಕಾರಿಗಳೆಂದು ಪದನಾಮೀಕರಿಸಲಾಗಿದೆ. ಸದರಿಯವರು ತಮ್ಮ ವಲಯದ ಶಾಲೆಗಳ ಹಾಜರಾತಿಯನ್ನು ಪರಿಶೀಲಿಸಿ ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರುವ ಪ್ರಯತ್ನವನ್ನು ಸಹ ನಡೆಸಲಾಗುತ್ತಿರುತ್ತದೆ. ಸರ್ಕಾರಿ/ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶುಲ್ಕರಹಿತ ಶಿಕ್ಷಣದ ಜೊತೆಗೆ ಹಲವಾರು ಪ್ರೋತ್ಸಾಹದಾಯಕ ಯೋಜನೆಗಳಾದ ಉಚಿತ ಸಮವಸ್ತ್ರ, ಶೂ ಸಾಕ್ಸ್, ಮಧ್ಯಾಹ್ನ ಉಪಹಾರ ಯೋಜನೆ ಅಡಿಯಲ್ಲಿ ಪೂರಕ ಪೌಷ್ಠಿಕ ಆಹಾರ, ಉಚಿತ ಪಠ್ಯಪುಸ್ತಕಗಳು, ಕ್ಷೀರಭಾಗ್ಯ ಯೋಜನೆಯಡಿ ಹಾಲು ವಿತರಣೆ ಯೋಜನೆಗಳನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳುವುದರೊಂದಿಗೆ ಮಕ್ಕಳ ದಾಖಲಾತಿ ಹಾಜರಾತಿಯನ್ನು ಶಾಲೆಯಲ್ಲಿ ಹೆಚ್ಚಿಸುವ ಸಲುವಾಗಿ ಸಮುದಾಯದತ್ತ ಶಾಲೆ ಕಾರ್ಯಕ್ರಮ, ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಹಲವಾರು ಯೋಜನೆಗಳನ್ನು/ ಕಾರ್ಯಕ್ರಮಗಳನ್ನು ರೂಪಿಸಲಾಗಿರುತ್ತದೆ. ಶಿಕ್ಷಕರ ಪಾಲ್ಗೊಳ್ಳುವಿಕೆ ಮೂಲಕ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಹಾಗೂ ವಿದ್ಯಾಭ್ಯಾಸ ಮುಂದುವರೆಸಲು ಇಲಾಖಾ ವತಿಯಿಂದ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಕ್ಕಳು ಶಾಲೆ ಬಿಡದಂತೆ ಮುಂಜಾಗ್ರತಾ ಕ್ರಮ ವಹಿಸಲಾಗಿದೆ.

**ಸಂಖ್ಯೆ:ಇಪಿ 371 ಪಿಜಿಸಿ 2023**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು